CW.1 PW.1

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.1124/2016

| | |
|---|---|
| ಸಾಕ್ಷಿದಾರರ ಹೆಸರು | ನರಸಯ್ಯ |
| ತಂದೆಯ ಹೆಸರು | ಬೆಟ್ಟೇಗೌಡ |
| ವಯಸ್ಸು | 78 ವರ್ಷ |
| ವೃತ್ತಿ | ವ್ಯವಸಾಯ |
| ವಿಳಾಸ | ಹುಲಿಬೆಲೆ ಗ್ರಾಮ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 22.01.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿಯನ್ನು ನೋಡಿರುವುದಿಲ್ಲ. ಚಾಸಾ-2 ನನ್ನ ಮಗ. ಚಾಸಾ-3 ರಿಂದ 6 ರವರ ಪರಿಚಯ ಇರುತ್ತದೆ.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ. ಸುಮಾರು ವರ್ಷಗಳ ಹಿಂದೆ ನನ್ನ ಮಗನಿಗೆ ಒಂದು ಅಪಘಾತವಾಗಿದ್ದು ಈ ಸಂಬಂಧ ಪೋಲೀಸರು ನನ್ನನ್ನು ಠಾಣೆಗೆ ಕರೆಯಿಸಿ 2-3 ಖಾಲಿ ಬಿಳಿಯ ಹಾಳೆಗಳಿಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ನನಗೆ ಯಾವುದಕ್ಕೆ ಮತ್ತು ಯಾವ ಕಾರಣಕ್ಕೆ ಸಹಿ ಪಡೆದಿರುತ್ತಾರೆ ಎಂದು ಗೊತ್ತಿಲ್ಲ. ಅಪಘಾತ ಯಾರ ತಪ್ಪಿ ನಿಂದ ಆಗಿರುತ್ತದೆಂದು ಗೊತ್ತಿರುವುದಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ದೂರು ಆಗಿದ್ದು ಅದನ್ನು ಈಗ ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗ ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2ಎ) ಎಂದು ಗುರುತಿಸಲಾಯಿತು.

ನನ್ನನ್ನು ಪೋಲೀಸರು ಯಾವುದೇ ಪಂಚನಾಮೆಗೆ ಕರೆದಿರಲಿಲ್ಲ ಹಾಗೂ ನನ್ನ ಮುಂದೆ ಏನನ್ನು ಅಮಾನತು ಪಡಿಸಿಕೊಂಡಿರವುದಿಲಃ ಯಾವುದೇ ಪಂಚನಾಮೆ ಮಾಡಿರುವುದಿಲ್ಲ.

ಸಾಕ್ಷಿಗೆ ಸದರಿ ಪ್ರಕರಣದ ಅಮಾನತು ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-3 ಎಂದು ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ನಾನು ದಿನಾಂಕ 12.01.2016 ರಂದು ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ನಾನು ಪೋಲೀಸರಿಗೆ ಆರೋಪಿಯ ವಿರುದ್ಧ ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 12.01.2016 ರಂದು ಕನಕಪುರ ಟೌನ್ ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣ ಅಂಕಣ 3 ಪ್ರಯಾಣಿಕರ ತಂಗುದಾಣದ ಮುಂಭಾಗದ ರಸ್ತೆಯ ಮಧ್ಯೆ ಇರುವ ಜಾಗವನ್ನು ನಾನು ತೋರಿಸಿದ ಸ್ಥಳದಲ್ಲಿ ಚಾಸಾ-5 ಮತ್ತು 6 ರವರ ಸಮಕ್ಷಮ ಸಂಜೆ 4.45 ರಿಂದ 5.15

ಗಂಟೆಯವರೆಗೂ ಈಗ ಓದಿ ಹೇಳಿದಂತೆ ಮಹಜರ್ ಮಾಡಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 12.01.2016 ರಂದು ಕನಕಪುರ ಟೌನ್ ಸಂಚಾರಿ ಪೋಲೀಸ್ ಠಾಣಾ ಆವರಣದಲ್ಲಿ ನನ್ನ ಹಾಗೂ ಚಾಸಾ-5 ಮತ್ತು 6 ರವರ ಸಮಕ್ಷಮ ಸಂಜೆ 5.30 ರಿಂದ 6 ಗಂಟೆಯವರೆಗೂ ಮಹಜರ್ ಮಾಡಿ ಅಪಘಾತ ಪಡಿಸಿದ ಕೆ ಎಸ್ ಆರ್ ಟಿ ಸಿ ಬಸ್ ಸಂಖ್ಯೆ ಕೆಎ-42-ಎಫ್ 173 ನ್ನು ಅಮಾನತು ಪಡಿಸಿಕೊಂಡು ಈಗ ಓದಿ ಹೇಳಿದಂತೆ ಮಹಜರ್ ಮಾಡಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಮತ್ತು ಆರೋಪಿತರು ರಾಜಿ ಮಾಡಿಕೊಂಡಿರುತ್ತೇವೆಂನದರೆ ಸರಿ. ಆದ್ದರಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**